**1.ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19 ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗ್ರತ ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದಾಗಿ ತಿಳಿಸಿರುತ್ತಾರೆ. ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 45ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ನೀಡುತ್ತಿರುದ್ದಾಗಿ ತಿಳಿಸಿದರು. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**2.ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಡ ಸಂಬಂಧಿಸಿದ ವಿಷಯಗಳ ಬಗ್ಗೆ.**

ವಾರ್ಡ್ ವ್ಯಾಪ್ತಿಯ ಬರುವ ಕುಡಿಯುವ ನೀರು ಮತ್ತು ಒಳಚರಂಡಿಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು. ಮತ್ತು cc, oc, ಇಲ್ಲದಿರುವ ಮನೆಗಳಿಗೆ BWSSB ಜುಲ್ಮಾನೆ ವಿದಿಸುತ್ತಿರುವುದಾಗಿ ಸಾರ್ವಜನಿಕರು ಆಗ್ರಹಿಸಿದರು, ಜುಲ್ಮಾನೆ ಕೊಡಲು ಸಾದ್ಯವಾಗುವುದಿಲ್ಲ ಎಂದು ಸಾರ್ವಜನಿಕರು ನಿರಾಕರಿಸಿದರು ಆದ್ದರಿಂದ, ಈ ಹಿಂದೆ ರೆವಿನ್ಯೂ ಬಡಾವಣೆಗಳಲ್ಲಿ ನಿರ್ಮಿಸಿಕೊಂಡಿರುವ ಕಟ್ಟಡ ಮಾಲೀಕರಿಗೆ oc, cc, ಯನ್ನು ಬಿ.ಬಿ.ಎಂ.ಪಿ ವತಿಯಿಂದ ಈ ಹಿಂದೆ ನೀಡದೇ ಇರುವದರಿಂದ ಸದರಿ ಕಟ್ಟಡ ಮಾಲೀಕರುಗಳಿಂದ ಜುಲ್ಮಾನೆಯನ್ನು ವಸೂಲು ಮಾಡಬಾರದಾಗಿ ತೀರ್ಮಾನಿಸಿ, ಮೇಲಾಧಿಕಾರಿಗಳಿಗೆ ಪತ್ರ ವ್ಯವಹಾರ ಮಾಡಲು ಸಂಬಂದಿಸಿದ ಆಧಿಕಾರಿಗಳಿಗೆ ಸೂಚಿಸಲಾಯಿತು.

**3. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ದಿ ಕಾರ್ಯಗಳ ಬಗ್ಗೆ .**

ವಾರ್ಡ್‌ನ ಅಭಿವೃದ್ದಿ ಕಾಮಗರಿಗಳ ಬಗ್ಗೆ ಚರ್ಚಿಸಲಾಗಿದ್ದು. ಕಾವೇರಿ ಲೇಔಟ್‌ನ 1ನೇ ಮತ್ತು 2ನೇ ಆಡ್ಡ ರಸ್ತೆಯಲ್ಲಿ ಸಿಸಿ ರಸ್ತೆ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಚರ್ಚಿಸಲಾಯಿತು, ಈ ಬಗ್ಗೆ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

**4.ಬೀದಿ ದೀಪಗಳ ನಿರ್ವಹಣೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬೀದಿ ದೀಪಗಳ ಸಮರ್ಪಕವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

**5.ಕಂದಾಯ ಇಲಾಖೆಗೆ ಸಂಬಂದಿಸಿದ ವಿಷಯಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಖಾತೆಗಳನ್ನು ಸರಿಯಾದ ಸಮಯಕ್ಕೆ ಮಾಡಿಕೊಡುತಿಲ್ಲವೆಂದು ಸಾರ್ವಜನಿಕರು ತಿಳಿಸಿರುತ್ತಾರೆ. ಆದ್ದರಿಂದ ಈ ಕೂಡಲೇ ಸೂಕ್ತ ಕ್ರಮ ಕೈಗೊಂಡು ಸಮಯಕ್ಕೆ ಸರಿಯಾಗಿ ಖಾತೆಗಳನ್ನು ಮಾಡಿಕೊಡುವಂತೆ ಸಂಬಂಧಪಟ್ಟ ಸಹಾಯಕ ಕಂದಾಯ ಅಧಿಕಾರಿಗೆ ಸೂಚಿಸಲಾಯಿತು.

8/4/2021
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.56 ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

8/4/21
ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್

## ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/06/2020-21 ದಿನಾಂಕ: 08-04-2021

### ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ:04/12/2020, ಆದೇಶದಂತೆ ದಿನಾಂಕ;08.04.2021 ರಂದು ನೋಡಲ್ ಅಧಿಕಾರಿ ಶ್ರೀ.ಟಿ.ಎಂ.ನಾರಾಯಣಸ್ವಾಮಿ, ಸಹಾಯಕ ಕಾರ್ಯಪಾಲಕ ಅಭಿಯಂತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-56 ಎ.ನಾರಾಯಣಪುರ ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | | ಅಧಿಕಾರಿಗಳು |
| 1 | ಶ್ರೀ.ಟಿ.ಎಂ.ನಾರಾಯಣಸ್ವಾಮಿ | ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿ ವಾ.ನಂ.56, ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ |
| 2 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 3 | ಶ್ರೀಮತಿ.ನಾಗರತ್ನ | ಸಹಾಯಕ ಕಂದಾಯ ಅಧಿಕಾರಿ |
| 4 | ಶ್ರೀಮತಿ.ಇಂದುಶ್ರೀ | ಆರೋಗ್ಯ ಅಧಿಕಾರಿ ವಾರ್ಡ್ ನಂ 56 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 5 | ಶ್ರೀ. ಅಮಿತ್.ಬಿ.ಸಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ 56 |
| 6 | ಶ್ರೀಮತಿ.ಅಮೃತ ನಾಯಕ್ | ಮೌಲ್ಯಮಾಪಕರು,ಬಿಬಿಎಂಪಿ ಕಂದಾಯ ನಿರೀಕ್ಷಕರು ವಾರ್ಡ್ ನಂ.56 |
| 7 | ಶ್ರೀ.ರಾಘವೇಂದ್ರ | ಹಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀ.ಮಹಮ್ಮದ್ ಮುದಾಸೀರ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ |
| | | |
| | | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |
| 9 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 10 | ಶ್ರೀಮತಿ.ಮಂಗಳ | ಎ-ನಾರಾಯಣಪುರ |
| 11 | ಶ್ರೀ.ಸುನಿಲ್ | ಎ-ನಾರಾಯಣಪುರ |
| 12 | ಶ್ರೀಮತಿ.ಹೇಮಲಾತ | ಎ-ನಾರಾಯಣಪುರ |
| 13 | ಶ್ರೀ.ಪ್ರದೀಪ್ ರೆಡ್ಡಿ | ಎ-ನಾರಾಯಣಪುರ |
| 14 | ಶ್ರೀ.ಡಾ॥ ಸುಂದರ್ ಶ್ರೀನಿವಾಸನ್ | ಎ-ನಾರಾಯಣಪುರ |

Scanned with CamScanner